**ಕರ್ನಾಟಕ ಸರ್ಕಾರ**
**ಕರ್ನಾಟಕ ವಿಧಾನ ಪರಿಷತ್ತು**
**151ನೇ ಅಧಿವೇಶನ-2023**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 689 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಹಾಗೂ ಪರಿಸರ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 11.12.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ |
| (ಆ) | ಸಾರಿಗೆ ವಲಯದಿಂದ ಅತಿ ಹೆಚ್ಚು ಶೇ.50.5 ರಷ್ಟು ಮಾಲಿನ್ಯವಾಗುತ್ತಿದ್ದು ರಸ್ತೆ ಧೂಳಿನಿಂದ ಶೇ.16.9, ಕಟ್ಟಡ ನಿರ್ಮಾಣ ಮತ್ತು ತೆರವು ಚಟುವಟಿಕೆಗಳಿಂದ ಶೇ.11 ತ್ಯಾಜ್ಯ ಸುಡುವುದರಿಂದ ಶೇ.5.9, ಕೈಗಾರಿಕೆಗಳಿಂದ ಶೇ.0.1 ಮಾಲಿನ್ಯ ಉಂಟಾಗುತ್ತಿರುವುದರ ಬಗ್ಗೆ ಸರ್ಕಾರ ಸಮೀಕ್ಷೆ ಏನಾದರೂ ನಡೆಸಿದೆಯೇ; | ಬೆಂಗಳೂರು ನಗರದ ವಾಯು ಮಾಲಿನ್ಯಕ್ಕೆ ಕಾರಣವಾದ ಮೂಲಗಳನ್ನು ತಿಳಿಯಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು M/s. Centre for Study for Science, Technology and Policy (CSTEP), Bengaluru ಇವರ ಸಹಯೋಗದೊಂದಿಗೆ ಕೈಗೊಂಡ 'Source Apportionment and Emission Inventory Study' ಅಧ್ಯಯನದ ವರದಿಯ ಪ್ರಕಾರ, ಸಾರಿಗೆ ವಲಯದಿಂದ ಅತಿ ಹೆಚ್ಚು ಶೇ.50.6 ರಷ್ಟು ಮಾಲಿನ್ಯವಾಗುತ್ತಿದ್ದು, ರಸ್ತೆ ಧೂಳಿನಿಂದ ಶೇ.16.9, ಕಟ್ಟಡ ನಿರ್ಮಾಣ ಮತ್ತು ತೆರವು ಚಟುವಟಿಕೆಗಳಿಂದ ಶೇ.11, ತ್ಯಾಜ್ಯ ಸುಡುವುದರಿಂದ ಶೇ.5.9 ಹಾಗೂ ಕೈಗಾರಿಕೆಗಳಿಂದ ಶೇ.0.1 ರಷ್ಟು ಮಾಲಿನ್ಯವಾಗುತ್ತಿದೆ. ಈ ಅಧ್ಯಯನ ವರದಿಯನ್ನು ಅನುಸರಿಸಿ, ಬೆಂಗಳೂರು ನಗರದ ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ 44 ಅಂಶಗಳ ಕ್ರಿಯಾ ಯೋಜನೆಯನ್ನುಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ತಯಾರಿಸಲಾಗಿದೆ. ತದನಂತರದಲ್ಲಿ ಸದರಿ ಕ್ರಿಯಾ ಯೋಜನೆಯನ್ನು ಪರಿಷ್ಕರಿಸಿ, ಅದರಂತೆ ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. |
| (ಇ) | ಕಳೆದ 5 ವರ್ಷಗಳಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಎಷ್ಟು ವಾಹನಗಳು ಮತ್ತು ಕಾರ್ಖಾನೆಗಳನ್ನು ಪರಿಶೀಲಿಸಿ, ಎಷ್ಟು | ಬೆಂಗಳೂರು ನಗರದಲ್ಲಿ ವಾಹನಗಳಿಂದ ಉಂಟಾಗುವ ವಾಯು ಮಾಲಿನ್ಯವನ್ನು ನಿಯಂತ್ರಿಸಲು ಸಾರಿಗೆ ಇಲಾಖೆಯ ಸಂಯೋಗದೊಂದಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ವಾಹನಗಳ |

<table>
<tr>
<td></td>
<td>ದಂಡವನ್ನು ವಿಧಿಸಲಾಗಿದೆ; ವಿಧಿಸಿರುವ ದಂಡದ ಮೊತ್ತ ಎಷ್ಟು; (ವಿವರ ನೀಡುವುದು)</td>
<td>ತಪಾಸಣೆಯನ್ನು ನಡೆಸಲಾಗುತ್ತಿದ್ದು, ಕಳೆದ ಆರು ವರ್ಷಗಳಿಂದ ಕೈಗೊಂಡಿರುವ ವಾಹನಗಳ ತಪಾಸಣೆಗಳ ವಿವರಗಳನ್ನು ಕೆಳಕಂಡಂತೆ ಸಾರಸಂಗ್ರಹಿಸಲಾಗಿದೆ.
<table>
<tr><th>ವಾಹನದ ಮಾದರಿ</th><th>ಸಂಖ್ಯೆ</th><th>Confirm</th><th>% ವಾರು</th><th>Non-confirm</th><th>% ವಾರು</th></tr>
<tr><td>ಪೆಟ್ರೋಲ್</td><td>54748</td><td>51765</td><td>94.6%</td><td>2983</td><td>5.4%</td></tr>
<tr><td>ಡಿಸ್ಸೆಲ್</td><td>24770</td><td>21923</td><td>88.5%</td><td>2847</td><td>11.5%</td></tr>
<tr><td>ಒಟ್ಟು</td><td>79518</td><td>73688</td><td>92.7%</td><td>5830</td><td>7.3 %</td></tr>
</table>
2022-23ನೇ ಸಾಲಿನಲ್ಲಿ ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಒಟ್ಟು 17163 ಪರಿವೀಕ್ಷಣೆಗಳನ್ನು ಮಾಡಲಾಗಿದ್ದು, ಕೈಗೊಂಡ ಪರಿವೀಕ್ಷಣೆಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.<br><br>
ವಾಹನಗಳಿಂದ ಉಂಟಾಗುವ ವಾಯು ಮಾಲಿನ್ಯವನ್ನು ಮಾಪನ ಮಾಡುವ ಕಾರ್ಯ ಹಾಗೂ ಮಾಲಿನ್ಯ ನಿಯಂತ್ರಣಕ್ಕಾಗಿ ಸಂಬಂಧಪಟ್ಟ ಇಲಾಖೆಗೆ ಸೂಕ್ತ ನಿರ್ದೇಶವನ್ನು ನೀಡುವ ಜವಾಬ್ದಾರಿಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಹೊಂದಿದ್ದು, ದಂಡವನ್ನು ವಿಧಿಸುವುದು ಮಂಡಳಿಯ ಅಧಿಕಾರ ವ್ಯಾಪ್ತಿಗೊಳಪಡುವುದಿಲ್ಲ.</td>
</tr>
<tr>
<td>(ಈ)</td>
<td>ಪಿ.ಎಂ.2.5 ಮಾಲಿನ್ಯಕಾರಕವು ಮಾನವನ ದೇಹಕ್ಕೆ ತುಂಬಾ ಅಪಾಯಕಾರಿ, ಪಿ.ಎಂ.2.5 ಕಣ ಗಂಟಲನ್ನು ದಾಟಿ ಶ್ವಾಸಕೋಶ ಹಾಗೂ ರಕ್ತನಾಳಗಳನ್ನು ಪ್ರವೇಶಿಸುವ ಸಾಧ್ಯತೆ ಇರುವುದರಿಂದ ಹೃದಯಾಘಾತ, ಕ್ಯಾನ್ಸರ್ ನಂತಹ ಗಂಭೀರ ಕಾಯಿಲೆಗಳಿಗೂ ಕಾರಣವಾಗುತ್ತಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ಪಿ.ಎಂ.2.5 ಮಾಲಿನ್ಯಕಾರಕವು ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಇದರಿಂದಾಗಿ ಹೃದಯಾಘಾತ, ಕ್ಯಾನ್ಸರ್ ನಂತಹ ಗಂಭೀರ ಕಾಯಿಲೆಗಳಿಗೆ ಕಾರಣವಾಗಿರುವುದು ಗಮನಕ್ಕೆ ಬಂದಿರುವುದಿಲ್ಲ</td>
</tr>
<tr>
<td>(ಉ)</td>
<td>ಮಾಲಿನ್ಯ ನಿಯಂತ್ರಣ ಮಂಡಳಿಯ ಬೇಜವಾಬ್ದಾರಿಯಿಂದ ಹಾಗೂ ಸರಿಯಾಗಿ ಪರಿಶೀಲನಾ ಕಾರ್ಯನಿರ್ವಹಿಸುತ್ತಿಲ್ಲದಿರುವುದರಿಂದ, ಈ ರೀತಿಯ ಮಾಲಿನ್ಯ ಹದಗೆಡುತ್ತಿದ್ದು ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ</td>
<td>ರಾಜ್ಯದಲ್ಲಿ ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>
▪ ಮಂಡಳಿಯು ರಾಷ್ಟ್ರೀಯ ವಾಯು ಗುಣಮಟ್ಟ ಪರಿಶೀಲನಾ ಕಾರ್ಯಕ್ರಮದ (NAMP) ಅಡಿಯಲ್ಲಿ</td>
</tr>
</table>

| | | |
|---|---|---|
| | ತೆಗೆದುಕೊಳ್ಳಲಾಗಿದೆಯೇ? | ಬೆಂಗಳೂರು ನಗರವಲ್ಲದೇ ರಾಜ್ಯದ ಪ್ರಮುಖ ನಗರಗಳ ವಾಯು ಗುಣಮಟ್ಟವನ್ನು ಮಾಪನ ಮಾಡುತ್ತಿದೆ.<br><br>▪ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾರ್ಗಸೂಚಿಯಂತೆ ರಾಜ್ಯದಲ್ಲಿ ಒಟ್ಟು 37 ಮಾನವ ಚಾಲಿತ ವಾಯು ಮಾಪನ ಕೇಂದ್ರಗಳು(Manual Monitoring Stations) ಹಾಗೂ 39 ನಿರಂತರ ಪರಿವೇಷ್ಟಕ ವಾಯು ಗುಣಮಟ್ಟ ಮಾಪನ ಕೇಂದ್ರಗಳನ್ನು(Continuous Ambient Air Quality Monitoring Stations) ಸ್ಥಾಪಿಸಿ, ವಾಯು ಗುಣಮಟ್ಟವನ್ನು ಮಾಪನ ಮಾಡಲಾಗುತ್ತಿದೆ. 39 ನಿರಂತರ ವಾಯು ಮಾಪನ ಕೇಂದ್ರಗಳಲ್ಲಿ ಸತತ ಇಪ್ಪತ್ನಾಲ್ಕು ಗಂಟೆಗಳ ಕಾಲ ಗಂಧಕದ ಡೈ ಆಕ್ಸೈಡ್ ($SO_2$) ಸಾರಜನಕದ ಡೈ ಆಕ್ಸೈಡ್ ($NO_2$), ಧೂಳಿನ ಕಣಗಳು ($PM_{10}$) ಮತ್ತು ($PM_{2.5}$), ಇಂಗಾಲದ ಮೊನಾಕ್ಸೈಡ್ (CO), ಓಜೋನ್ (O3), ಅಮೋನಿಯಾ (NH3) ಮತ್ತು ಬೆನ್‌ಜೀನ್ (Benzene) ಸೇರಿದಂತೆ ಎಂಟು ಮಲಿನ ಕಾರಕಗಳನ್ನು ಮಾಪನ ಮಾಡಲಾಗುತ್ತಿದೆ ಹಾಗೂ 37 ಮಾನವ ಚಾಲಿತ ಕೇಂದ್ರಗಳಲ್ಲಿ (Manual Monitoring Stations) 24 ಗಂಟೆಗಳ ಕಾಲ, ವಾರಕ್ಕೆ 2 ಬಾರಿ, ಗಂಧಕದ ಡೈ ಆಕ್ಸೈಡ್($SO_2$) ಸಾರಜನಕದ ಡೈ ಆಕ್ಸೈಡ್ ($NO_2$), ಧೂಳಿನ ಕಣಗಳ ಗಾತ್ರ 10 ಮೈಕ್ರಾನ್ ($PM_{10}$) ಹಾಗೂ 2.5 ಮೈಕ್ರಾನ್ (($PM_{2.5}$), ಅಮೋನಿಯಂ ಮತ್ತು ಸೀಸ ಮಲಿನಕಾರಕಗಳನ್ನು ವಿಶ್ಲೇಷಿಸಲಾಗುತ್ತಿದೆ.<br><br>▪ ಸದರಿ ಮಾಪನದಿಂದ ಸಂಗ್ರಹಿಸಿದ ದತ್ತಾಂಶವನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಗೆ ವಿದ್ಯುನ್ಮಾನ ಮಾರ್ಗದ ಮೂಲಕ ಕಳುಹಿಸಲಾಗುತ್ತಿದೆ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮಂಡಳಿಯ ಅಂತರ್ಜಾಲದಲ್ಲಿ (ವೆಬ್‌ಸೈಟ್) ಪ್ರಕಟಿಸಲಾಗುತ್ತಿದೆ. ಮುಂದುವರೆದು, ವಾಯು ಮಾಪನದ ದತ್ತಾಂಶವನ್ನು ಸಂಬಂಧಪಟ್ಟ ಇಲಾಖೆಗಳಿಗೆ |

| | | |
|---|---|---|
| | | ನಿಯಮಿತವಾಗಿ ಕಳುಹಿಸುತ್ತಾ ಮಾಲಿನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ಕ್ರಿಯಾಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸೂಚನೆಗಳನ್ನು ನೀಡಲಾಗುತ್ತಿದೆ.<br><br>▪ ಪ್ರತಿದಿನ ಬೆಂಗಳೂರಿನ 11 ನಿರಂತರ ಪರಿವೀಕ್ಷಕ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕವನ್ನು (AQI) ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳಿಗೆ ಹಾಗೂ ವಾರ್ತಾ ಇಲಾಖೆಗೆ ಎಸ್.ಎಂ.ಎಸ್ ಮುಖಾಂತರ ಕಳುಹಿಸಲಾಗುತ್ತಿದೆ.<br><br>▪ ಕೇಂದ್ರದ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ರಾಷ್ಟ್ರೀಯ ಶುದ್ಧ ವಾಯು ಕಾರ್ಯಕ್ರಮವನ್ನು(NCAP) ಜಾರಿ ಮಾಡಿದ್ದು, ರಾಜ್ಯದ 4 ನಗರಗಳನ್ನು ಅಂದರೆ ಬೆಂಗಳೂರು, ಹುಬ್ಬಳ್ಳಿ-ಧಾರವಾಡ, ಕಲಬುರಗಿ ಮತ್ತು ದಾವಣಗೆರೆ ಇವುಗಳನ್ನು ರಾಷ್ಟ್ರೀಯ ಪರಿವೀಕ್ಷಕ ವಾಯು ಗುಣಮಟ್ಟ ಸಾಧಿಸದ ನಗರಗಳೆಂದು (Non-attainment cities) ಗುರುತಿಸಲಾಗಿದೆ. ಈ ನಗರಗಳ ಪೈಕಿ ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ 44 ಅಂಶಗಳ ಕ್ರಿಯಾ ಯೋಜನೆಯನ್ನು ಹಾಗೂ ಉಳಿದ 3 ನಗರಗಳಿಗೆ ಸಂಬಂಧಿಸಿದಂತೆ 27 ಅಂಶಗಳ ಕ್ರಿಯಾ ಯೋಜನೆಯನ್ನು ವಾಯು ಮಾಲಿನ್ಯವನ್ನು ನಿಯಂತ್ರಣ ಮಾಡುವ ದೃಷ್ಠಿಯಿಂದ ಸಿದ್ಧಪಡಿಸಿ, ಅವುಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>▪ ಇದಲ್ಲದೆ, ರಾಜ್ಯದಲ್ಲಿ ನಾಲ್ಕು ನಗರಗಳಲ್ಲಿ ವಾಯು ಮಾಲಿನ್ಯಕ್ಕೆ ಕಾರಣವಾದ ಮೂಲಗಳನ್ನು ತಿಳಿಯಲು 'Source Apportionment and Emission Inventory Study' ಅಧ್ಯಯನವನ್ನು ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ M/s. Centre for Study for Science, Technology and Policy (CSTEP), Bengaluru ಇವರಿಂದ ಹಾಗೂ ಇತರೆ ಮೂರು |

ಕಲುಷಿತ ನಗರಗಳಿಗೆ ಸಂಬಂಧಿಸಿದಂತೆ IIT, Madras ಇವರಿಂದ ಅಧ್ಯಯನ ಕೈಗೊಳ್ಳಲಾಗಿದ್ದು, ಅದರಂತೆ ಕ್ರಿಯಾ ಯೋಜನೆಯನ್ನು ಪರಿಷ್ಕರಿಸಿ, ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಕ್ರಮ ವಹಿಸಲಾಗುತ್ತಿದೆ.

ಮುಂದುವರೆದು, ವಾಯು ಮಾಲಿನ್ಯ ತಡೆಗೆ ಪೂರಕವಾಗಿ ಕರ್ನಾಟಕ ಈ ಕೆಳಕಂಡ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ ಹಾಗೂ ಕೈಗೊಳ್ಳಲಾಗುತ್ತಿದೆ.

- ಕಾರ್ಖಾನೆಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನೀಡುವ ಸಮ್ಮತಿ ಪತ್ರದಲ್ಲಿ, ಪರಿಸರ (ಸಂರಕ್ಷಣಾ) ಕಾಯ್ದೆ, 1986 ರಲ್ಲಿ ನಿರ್ದಿಷ್ಟಪಡಿಸಿರುವಂತೆ ವಾಯು ಮಾನಕಗಳು ನಿಗದಿತ ಪರಿಮಿತಿಯೊಳಗಿರುವ ನಿಬಂಧನೆ ವಿಧಿಸಲಾಗುತ್ತಿದೆ ಹಾಗೂ ನಿಯತಕಾಲಿಕವಾಗಿ ವಾಯು ಮಾಲಿನ್ಯ ಮಾಡುವಂತಹ ಕಾರ್ಖಾನೆಗಳನ್ನು ಪರಿವೀಕ್ಷಣೆಗೊಳಪಡಿಸಲಾಗುತ್ತಿದೆ.
- ರಾಸಾಯನಿಕ ಹಾಗೂ ಇನ್ನಿತರ ಅಧಿಕ ಮಾಲಿನ್ಯ ಉಂಟುಮಾಡುವ ಕೈಗಾರಿಕೆಗಳಿಗೆ ನಿರಂತರ ಎಮಿಶನ್ ಮಾಪನ ಉಪಕರಣಗಳನ್ನು ಅಳವಡಿಸಿ ಮಾಪನ ವರದಿಯನ್ನು ಕೇಂದ್ರ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂತರ್ಜಾಲಗಳಿಗೆ ಸಂಪರ್ಕ ಕಲ್ಪಿಸಲಾಗಿದೆ. ಇದರಿಂದ ಕೈಗಾರಿಕೆಗಳು ನಿಗಧಿ ಪಡಿಸಿದ ಮಾನಕಕ್ಕಿಂತ ಹೆಚ್ಚು ಹೊಗೆ ಹೊರಸೂಸದಂತೆ ಕಾಲಕಾಲಕ್ಕೆ ಇವುಗಳ ಕಾರ್ಯಕ್ಷಮತೆಯನ್ನು ಪರೀಕ್ಷಿಸಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.
- ಘನತ್ಯಾಜ್ಯ ಸುಡುವುದರಿಂದಾಗುವ ವಾಯು ಮಾಲಿನ್ಯವನ್ನು ತಡೆಯುವ ದೃಷ್ಟಿಯಿಂದ ವಾಯು (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ, 1981ರ ಕಲಂ 19(5)ರ ಅಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 06 ಇಎನ್‌ಜಿ 2017, ದಿನಾಂಕ:03.08.2017ರಲ್ಲಿ ಬೃಹತ್ ಬೆಂಗಳೂರು

| | | |
|---|---|---|
| | | ಮಹಾನಗರಪಾಲಿಕೆ ವ್ಯಾಪ್ತಿಯನ್ನು ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ರಾಜ್ಯಾದ್ಯಂತ ಇರುವ ಘನತ್ಯಾಜ್ಯ ಭೂಭರ್ತಿ ಘಟಕಗಳಲ್ಲಿನ ತೆರೆದ ಜಾಗದಲ್ಲಿ ಮರಗಿಡಗಳ ರೆಂಬೆ ಮತ್ತು ಎಲೆಗಳೂ ಸೇರಿದಂತೆ ಯಾವುದೇ ರೀತಿಯ ಘನತ್ಯಾಜ್ಯಗಳನ್ನು ಸುಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.<br>• ಕಟ್ಟಡಗಳ ನಿರ್ಮಾಣದ ಮತ್ತು ಕಟ್ಟಡ ಉರುಳಿಸುವ ಸಮಯದಲ್ಲಿ ಉಂಟಾಗುವ ಘನತ್ಯಾಜ್ಯಗಳನ್ನು (Construction & Demolition Waste) ವಾಹನಗಳಲ್ಲಿ ಸಾಗಿಸುವ ಸಮಯದಲ್ಲಿ ತ್ಯಾಜ್ಯ ಚೆಲ್ಲದಂತೆ ಹಾಗೂ ತ್ಯಾಜ್ಯಕ್ಕೆ ನೀರಿನ ಸಿಂಪರಣೆ ಮಾಡಿ ಯಾವುದೇ ರೀತಿಯಲ್ಲಿ ವಾಯು ಮಾಲಿನ್ಯ ಆಗದಂತೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಿಗೂ ಸೇರಿದಂತೆ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಿ.ಎಂ.ಆರ್.ಸಿ.ಎಲ್, ಕೆ.ಆರ್.ಡಿ.ಎಲ್, ಸಿ.ಪಿ.ಡಬ್ಲ್ಯೂ.ಡಿ, ಪಿ.ಡಬ್ಲ್ಯೂ.ಡಿ, ಇಲಾಖೆಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ.<br>• ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಪರಿಸರ ವಿಮೋಚನಾ ಪತ್ರ (Environmental Clearence) ನೀಡುವ ಸಂದರ್ಭದಲ್ಲಿ ಧೂಳಿನ ಕಣಗಳಿಂದ ಉಂಟಾಗುವ ಮಾಲಿನ್ಯವನ್ನು ತಡೆಗಟ್ಟುವ ದೃಷ್ಟಿಯಿಂದ ಸುತ್ತಲೂ ತಗಡಿನ ತಡೆಗೋಡೆಯನ್ನು ನಿರ್ಮಾಣ ಮಾಡುವುದನ್ನು ಹಾಗೂ ನೀರಿನ ಸಿಂಪರಣೆ ಮಾಡುವುದನ್ನು ಕಡ್ಡಾಯ ಮಾಡಲಾಗಿದೆ.<br>• ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯಿದೆ, 1981ರ ಕಲಂ 19(3)ರಡಿ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 168 ಇಪಿಸಿ 2017, ದಿನಾಂಕ;11.08.2017ರಲ್ಲಿ, ರಾಜ್ಯಾದ್ಯಂತ ವಾಯುಮಾಲಿನ್ಯ ನಿಯಂತ್ರಣಕ್ಕೊಳಪಟ್ಟಿರುವ ಪ್ರದೇಶದಲ್ಲಿನ ಸಿಮೆಂಟ್ ಆವಿಗೆ (kiln) ಮತ್ತು ಸಿಮೆಂಟ್ ಉತ್ಪಾದನಾ ಘಟಕಗಳಿಗೆ ಹೊಂದಿಕೊಂಡಿರುವ ಸುಣ್ಣದಕಲ್ಲನ್ನು ಬಳಸಿ ಗಂಧಕದ ಡೈ ಆಕ್ಸೈಡ್($SO_2$)) |

| | | |
|---|---|---|
| | | ಕಲುಷಿತ ನಗರಗಳಿಗೆ ಸಂಬಂಧಿಸಿದಂತೆ IIT, Madras ಇವರಿಂದ ಅಧ್ಯಯನ ಕೈಗೊಳ್ಳಲಾಗಿದ್ದು, ಅದರಂತೆ ಕ್ರಿಯಾ ಯೋಜನೆಯನ್ನು ಪರಿಷ್ಕರಿಸಿ, ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಕ್ರಮ ವಹಿಸಲಾಗುತ್ತಿದೆ.<br><br>ಮುಂದುವರೆದು, ವಾಯು ಮಾಲಿನ್ಯ ತಡೆಗೆ ಪೂರಕವಾಗಿ ಕರ್ನಾಟಕ ಈ ಕೆಳಕಂಡ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ ಹಾಗೂ ಕೈಗೊಳ್ಳಲಾಗುತ್ತಿದೆ.<br><br>• ಕಾರ್ಖಾನೆಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನೀಡುವ ಸಮ್ಮತಿ ಪತ್ರದಲ್ಲಿ, ಪರಿಸರ (ಸಂರಕ್ಷಣಾ) ಕಾಯ್ದೆ, 1986 ರಲ್ಲಿ ನಿರ್ದಿಷ್ಟಪಡಿಸಿರುವಂತೆ ವಾಯು ಮಾನಕಗಳು ನಿಗದಿತ ಪರಿಮಿತಿಯೊಳಗಿರುವ ನಿಬಂಧನೆ ವಿಧಿಸಲಾಗುತ್ತಿದೆ ಹಾಗೂ ನಿಯತಕಾಲಿಕವಾಗಿ ವಾಯು ಮಾಲಿನ್ಯ ಮಾಡುವಂತಹ ಕಾರ್ಖಾನೆಗಳನ್ನು ಪರಿವೀಕ್ಷಣೆಗೊಳಪಡಿಸಲಾಗುತ್ತಿದೆ.<br>• ರಾಸಾಯನಿಕ ಹಾಗೂ ಇನ್ನಿತರ ಅಧಿಕ ಮಾಲಿನ್ಯ ಉಂಟುಮಾಡುವ ಕೈಗಾರಿಕೆಗಳಿಗೆ ನಿರಂತರ ಎಮಿಶನ್ ಮಾಪನ ಉಪಕರಣಗಳನ್ನು ಅಳವಡಿಸಿ ಮಾಪನ ವರದಿಯನ್ನು ಕೇಂದ್ರ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂತರ್ಜಾಲಗಳಿಗೆ ಸಂಪರ್ಕ ಕಲ್ಪಿಸಲಾಗಿದೆ. ಇದರಿಂದ ಕೈಗಾರಿಕೆಗಳು ನಿಗಧಿ ಪಡಿಸಿದ ಮಾನಕಕ್ಕಿಂತ ಹೆಚ್ಚು ಹೊಗೆ ಹೊರಸೂಸದಂತೆ ಕಾಲಕಾಲಕ್ಕೆ ಇವುಗಳ ಕಾರ್ಯಕ್ಷಮತೆಯನ್ನು ಪರೀಕ್ಷಿಸಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಘನತ್ಯಾಜ್ಯ ಸುಡುವುದರಿಂದಾಗುವ ವಾಯು ಮಾಲಿನ್ಯವನ್ನು ತಡೆಯುವ ದೃಷ್ಟಿಯಿಂದ ವಾಯು (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ, 1981ರ ಕಲಂ 19(5)ರ ಅಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 06 ಇಎನ್‌ಜಿ 2017, ದಿನಾಂಕ:03.08.2017ರಲ್ಲಿ ಬೃಹತ್ ಬೆಂಗಳೂರು |

| | | |
|---|---|---|
| | | ಮಹಾನಗರಪಾಲಿಕೆ ವ್ಯಾಪ್ತಿಯನ್ನು ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ರಾಜ್ಯಾದ್ಯಂತ ಇರುವ ಘನತ್ಯಾಜ್ಯ ಭೂಭರ್ತಿ ಘಟಕಗಳಲ್ಲಿನ ತೆರೆದ ಜಾಗದಲ್ಲಿ ಮರಗಿಡಗಳ ರೆಂಬೆ ಮತ್ತು ಎಲೆಗಳೂ ಸೇರಿದಂತೆ ಯಾವುದೇ ರೀತಿಯ ಘನತ್ಯಾಜ್ಯಗಳನ್ನು ಸುಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.<br>• ಕಟ್ಟಡಗಳ ನಿರ್ಮಾಣದ ಮತ್ತು ಕಟ್ಟಡ ಉರುಳಿಸುವ ಸಮಯದಲ್ಲಿ ಉಂಟಾಗುವ ಘನತ್ಯಾಜ್ಯಗಳನ್ನು (Construction & Demolition Waste) ವಾಹನಗಳಲ್ಲಿ ಸಾಗಿಸುವ ಸಮಯದಲ್ಲಿ ತ್ಯಾಜ್ಯ ಚೆಲ್ಲದಂತೆ ಹಾಗೂ ತ್ಯಾಜ್ಯಕ್ಕೆ ನೀರಿನ ಸಿಂಪರಣೆ ಮಾಡಿ ಯಾವುದೇ ರೀತಿಯಲ್ಲಿ ವಾಯು ಮಾಲಿನ್ಯ ಆಗದಂತೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಿಗೂ ಸೇರಿದಂತೆ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಿ.ಎಂ.ಆರ್.ಸಿ.ಎಲ್, ಕೆ.ಆರ್.ಡಿ.ಎಲ್, ಸಿ.ಪಿ.ಡಬ್ಲ್ಯೂ.ಡಿ, ಪಿ.ಡಬ್ಲ್ಯೂ.ಡಿ, ಇಲಾಖೆಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ.<br>• ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಪರಿಸರ ವಿಮೋಚನಾ ಪತ್ರ (Environmental Clearence) ನೀಡುವ ಸಂದರ್ಭದಲ್ಲಿ ಧೂಳಿನ ಕಣಗಳಿಂದ ಉಂಟಾಗುವ ಮಾಲಿನ್ಯವನ್ನು ತಡೆಗಟ್ಟುವ ದೃಷ್ಟಿಯಿಂದ ಸುತ್ತಲೂ ತಗಡಿನ ತಡೆಗೋಡೆಯನ್ನು ನಿರ್ಮಾಣ ಮಾಡುವುದನ್ನು ಹಾಗೂ ನೀರಿನ ಸಿಂಪರಣೆ ಮಾಡುವುದನ್ನು ಕಡ್ಡಾಯ ಮಾಡಲಾಗಿದೆ.<br>• ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯಿದೆ, 1981ರ ಕಲಂ 19(3)ರಡಿ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 168 ಇಪಿಸಿ 2017, ದಿನಾಂಕ;11.08.2017ರಲ್ಲಿ, ರಾಜ್ಯಾದ್ಯಂತ ವಾಯುಮಾಲಿನ್ಯ ನಿಯಂತ್ರಣಕ್ಕೊಳಪಟ್ಟಿರುವ ಪ್ರದೇಶದಲ್ಲಿನ ಸಿಮೆಂಟ್ ಆವಿಗೆ (kiln) ಮತ್ತು ಸಿಮೆಂಟ್ ಉತ್ಪಾದನಾ ಘಟಕಗಳಿಗೆ ಹೊಂದಿಕೊಂಡಿರುವ ಸುಣ್ಣದಕಲ್ಲನ್ನು ಬಳಸಿ ಗಂಧಕದ ಡೈ ಆಕ್ಸೈಡ್($SO_2$)) |

| | | |
|---|---|---|
| | | ಹೊರಸೂಸುವಿಕೆಯನ್ನು ನಿಯಂತ್ರಿಸಬಲ್ಲ ಘಟಕಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಕೈಗಾರಿಕೆಗಳಲ್ಲಿ ಪೆಟ್ ಕೋಕ್ ಅನ್ನು ಇಂಧನವಾಗಿ ಬಳಸುವುದನ್ನು ನಿಷೇಧಿಸಲಾಗಿದೆ.<br>• ವಾಹನಗಳ ಹೊಗೆ ತಪಾಸಣಾ ಜವಾಬ್ದಾರಿಯು ಸಾರಿಗೆ ಇಲಾಖೆಯ ಅಧಿಕಾರ ವ್ಯಾಪ್ತಿಗೊಳಪಟ್ಟಿರುತ್ತದೆ. ಅದಾಗ್ಯೂ ಸಹ ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯವು, ಸಾರಿಗೆ ವಲಯದಿಂದ ಶೇ.42 ರಷ್ಟು ಉಂಟಾಗುತ್ತಿರುವುದನ್ನು ತಿಳಿದು ಕರ್ನಾಟಕ ರಾಜ್ಯ ಮಾಲಿನ್ಯ ಮಂಡಳಿಯಿಂದ ಡೀಸಲ್ ಮತ್ತು ಪೆಟ್ರೋಲ್ ವಾಹನಗಳು ಹೊರಸೂಸುವ ಹೊಗೆಯನ್ನು ಮಾಪನ ಮಾಡಲು ಸುಸಜ್ಜಿತ ಉಪಕರಣಗಳನ್ನೊಳಗೊಂಡ 12 ಹೊಗೆ ಮಾಪನ ಮಾಡುವ ಸಂಚಾರಿ ವಾಹನಗಳನ್ನು ಖರೀದಿಸಿದ್ದು, ಈ 12 ವಾಹನಗಳ ಪೈಕಿ 6 ವಾಹನಗಳನ್ನು ಬೆಂಗಳೂರು ನಗರಕ್ಕೆ ಹಂಚಿಕೆ ಮಾಡಲಾಗಿದೆ. ಈ ವಾಹನಗಳು ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ಸಂಸ್ಥೆಗಳ ಸಹಾಯದೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದ್ದು ಮಿತಿಗಿಂತ ಹೆಚ್ಚು ಹೊಗೆ ಹೊರಸೂಸುವ ವಾಹನಗಳ ಮೇಲೆ ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಕೈಗಾರಿಕೆಗಳ ಚಟುವಟಿಗಳ ಅನುಸಾರವಾಗಿ ವಾಯುಮಾಲಿನ್ಯ ತಡೆಗಟ್ಟುವ ಬಗ್ಗೆ ಹೆಚ್ಚು ಮಾಹಿತಿ ನೀಡಲು ಕಾರ್ಯಾಗಾರ ಮತ್ತು ಸಭೆಗಳನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಛೇರಿಗಳಲ್ಲಿ, ಕಾರ್ಖಾನೆಗಳಲ್ಲಿ ಹಾಗೂ ಸಂಬಂಧಿಸಿದ ಸಂಘ ಸಂಸ್ಥೆಗಳಲ್ಲಿ ನಿಯಮಿತವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಮಂಡಳಿಯ ಅಂತರ್ಜಾಲ ಹಾಗೂ ಪತ್ರಿಕೆ ಪ್ರಕಟಣೆಗಳ ಮುಖಾಂತರ ವಾಯು ಮಾಲಿನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ಜಾಗೃತಿ ಮೂಡಿಸಲಾಗುತ್ತಿದೆ.<br>• ವಾಹನ ಮಾಲಿನ್ಯ ತಗ್ಗಿಸುವ ಉದ್ದೇಶದಿಂದ ಕೇಂದ್ರ |

| | | |
|---|---|---|
| | | ಸರ್ಕಾರವು ಜಾರಿಗೊಳಿಸಿದ ಮಾರ್ಗಸೂಚಿಗಳನ್ವಯ ಏಪ್ರಿಲ್ 2020ರಿಂದ ವಾಹನಗಳಿಗೆ ಭಾರತ್ ಸ್ಟೇಜ್ VI ಎಂಜಿನ್ ಹಾಗೂ ಉರುವಲು (Fuel) ಅನ್ನು ಕಡ್ಡಾಯಗೊಳಿಸಲಾಗಿದೆ.<br>• 2022-23ನೇ ಸಾಲಿನಲ್ಲಿ ವಾಯು ಮಾಲಿನ್ಯದ ದತ್ತಾಂಶವನ್ನು ಅವಲೋಕಿಸಿದಾಗ, ಕರ್ನಾಟಕ ರಾಜ್ಯದಲ್ಲಿ ವಾಯು ಮಾಲಿನ್ಯ ಗುಣಮಟ್ಟ ಸೂಚ್ಯಂಕ (Air Quality Index-AQI) ಬಹುತೇಕ 'ಉತ್ತಮ ಹಾಗೂ ತೃಪ್ತಿಕರ' ಇರುವುದು ಕಂಡು ಬಂದಿದೆ. 2022-23ನE ಸಾಲಿನ ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ<br><br>ಪರಿಸರ ಮಾಲಿನ್ಯ ತಡೆಯುವ ನಿಟ್ಟಿನಲ್ಲಿ ಜಲ ಕಾಯ್ದೆ, ವಾಯು ಕಾಯ್ದೆ ಹಾಗೂ ಪರಿಸರ ಕಾಯ್ದೆಗಳಲ್ಲಿ ಗೊತ್ತುಪಡಿಸಲಾದ ಪ್ರಕಾರ್ಯಗಳನ್ನು ಹಾಗೂ ಜವಾಬ್ದಾರಿಗಳನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನಿಭಾಯಿಸುತ್ತಿದೆ. ಜವಾಬ್ದಾರಿ ನಿಭಾಯಿಸದ ಹಾಗೂ ದಾಯಿತ್ವ ತೋರದ ಮಂಡಳಿಯ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವುದು ನಿಯತ ಕ್ರಮದ ಆಡಳಿತಾತ್ಮಕ ಪ್ರಕ್ರಿಯೆಯಾಗಿರುತ್ತದೆ. |

**ಸಂಖ್ಯೆ: ಎಫ್‌ಇಇ/ 278 /ಇಪಿಸಿ /2023**

**(ಈಶ್ವರ್ ಬಿ. ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಹಾಗೂ ಪರಿಸರ ಸಚಿವರು